12 ಆಗಸ್ಟ್ 2025 ಮಂಗಳವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 154 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಆನ್‌ಲೈನ್‌ನಲ್ಲಿ ಬೆಟ್ಟಿಂಗ್ ಹಾಗೂ ಜೂಜಾಟಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ನಟ ರಾಣಾ ದಗ್ಗುಬಾಟಿ ಅವರು ಹೈದರಾಬಾದ್‌ನ ಜಾರಿ ನಿರ್ದೇಶನಾಲಯದ (ಇ.ಡಿ) ಎದುರು ಸೋಮವಾರ ವಿಚಾರಣೆಗೆ ಹಾಜರಾಗಿದ್ದರು.



ತಪಸ್ವಿನಿ ವೃದ್ಧ ಕನ್ಯೆ ಪ್ರಥಮ ರಾತ್ರಿಗಷ್ಟೇ ತರುಣಿಯಾದಳು... » 2


ಯುವನಿಧಿ ಯೋಜನೆ ಬಗ್ಗೆ ಮಾಹಿತಿ ನೀಡಿ » 3


ಪರಿಸರ ಸಂರಕ್ಷಣೆಗೆ ಎಲ್ಲರ ಕೊಡುಗೆ ಅತ್ಯವಶ್ಯ : ಖಂಡ್ರೆ » 4


# ಸಚಿವ ಸ್ಥಾನದಿಂದ ಕೆ.ಎನ್.ರಾಜಣ್ಣ ವಜಾ

## ಪಕ್ಷ ವಿರೋಧಿ ಹೇಳಿಕೆಗೆ ತಲೆದಂಡ | ಹೈಕಮಾಂಡ್ ಸೂಚನೆ ಬೆನ್ನಲ್ಲೇ ರಾಜೀನಾಮೆ

• ಪ್ರಜೋದಯ ವರದಿ

**ಬೆಂಗಳೂರು:** ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡೆಯ ವಿರುದ್ಧದ ವಿವಾದಾತ್ಮಕ ಹೇಳಿಕೆಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅತ್ಯಾಪ್ತ ಕೂಟದಲ್ಲಿ ಗುರುತಿಸಿಕೊಂಡಿದ್ದ ಕೆ.ಎನ್.ರಾಜಣ್ಣ ಅವರನ್ನು ಮಂತ್ರಿಮಂಡಲದಿಂದ ಹೊರದಬ್ಬಲಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಮತಗಳ್ಳತನದ ಮೂಲಕ ಅಧಿಕಾರ ಹಿಡಿದಿದ್ದಾರೆಂಬುದಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾಡಿದ ಆರೋಪಕ್ಕೆ ಸಚಿವ ರಾಜಣ್ಣ ಅವರು ಬಹಿರಂಗವಾಗಿಯೇ ಆಕ್ಷೇಪಾರ್ಹ ಹೇಳಿಕೆ ನೀಡಿದ್ದು, ಅವರ ಸಚಿವ ಸ್ಥಾನವನ್ನೇ ಕಸಿದುಕೊಳ್ಳುವಂತಾದದ್ದು ಕಾಂಗ್ರೆಸ್‌ನಲ್ಲಿನ ಹೊಸ ರಾಜಕೀಯ ಬೆಳವಣಿಗೆಗೆ ನಾಂದಿಯಾದಂತಾಗಿದೆ.

ಮೂರು ದಿನಗಳ ಹಿಂದೆಯಷ್ಟೇ ಬಿಜೆಪಿ ವಿರುದ್ಧ ಕರ್ನಾಟಕ ಪ್ರದೇಶ ಕಾಂಗ್ರೆಸ್ ಬೆಂಗಳೂರಿನಲ್ಲಿ ಆಯೋಜಿಸಿದ್ದ ಮತಗಳ್ಳತನ ಆರೋಪದ ಸಂಬಂಧದ ಪ್ರತಿಭಟನೆಯಲ್ಲಿ ಭಾಗಿಯಾದ ರಾಹುಲ್ ಗಾಂಧಿಯವರು ಕರ್ನಾಟಕದ ಮಹಾದೇವಪುರ ಸೇರಿ ಹಲವೆಡೆ ಮತಗಳ್ಳತನದ ಮೂಲಕ ಮೋದಿ ಪ್ರಧಾನಿಯಾಗಿದ್ದಾರೆಂದು ಅಬ್ಬರಿಸಿದ್ದರು.

ಈ ಸಂಬಂಧ ಸುದ್ದಿಗಾರರ ಎದುರು ಪ್ರತಿಕ್ರಿಯೆ ಕೊಡುವ ಆತುರದಲ್ಲಿ ರಾಜಣ್ಣ ಅವರು, ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಕರ್ನಾಟಕದಲ್ಲಿ ನಮ್ಮ ಸರ್ಕಾರವೇ ಅಧಿಕಾರದಲ್ಲಿತ್ತು. ಚುನಾವಣಾ ಆಯೋಗವು ಮತದಾರರ ಪಟ್ಟಿಗೆ ಆಕ್ಷೇಪಣೆಗೆ ಅವಕಾಶ ನೀಡಿದ ಸಂದರ್ಭದಲ್ಲಿ ನಾವು ಆರೋಪ ಮಾಡಬೇಕಿತ್ತು. ಅದರಲ್ಲಿ ನಮ್ಮ ಪ್ರಮಾದವೂ ಕೂಡ ಇದೆ ಎಂಬ ಅರ್ಥದಲ್ಲಿ ಕಾಂಗ್ರೆಸ್ ವಿರುದ್ಧವೇ ಬಹಿರಂಗ ಅನಿಸಿಕೆಯನ್ನು ತೋಡಿಕೊಂಡಿದ್ದರು.

ವಿಧಾನಸಭೆ ಅಧಿವೇಶನ ಆರಂಭದ ಹೊತ್ತಿನಲ್ಲೇ ರಾಜಣ್ಣ ಅವರ ಈ ಹೇಳಿಕೆಯು ಬಿಜೆಪಿ ಹಾಗು ಜೆಡಿಎಸ್‌ಗೆ ಆಹಾರ ಆದದ್ದಲ್ಲದೆ, ಸದನದಲ್ಲೂ ಪ್ರತಿಪಕ್ಷಗಳು ಈ ವಿಚಾರ ಇಟ್ಟುಕೊಂಡು ಸರ್ಕಾರವನ್ನು ಮುಜುಗರಕ್ಕೆ ಗುರಿಪಡಿಸಬಹುದೆಂಬ ಪೇಚಿನಿಂದಾಗಿ ರಾಜಣ್ಣ ಅವರ ಹೇಳಿಕೆಯಿಂದ ಪಕ್ಷದ ವರ್ಚಸ್ಸಿಗೆ ಉಂಟಾಗಬಹುದಾದ ಹಾನಿಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಹೈಕಮಾಂಡ್ ರಾಜಣ್ಣ ಅವರಿಂದ ಕೂಡಲೇ ರಾಜೀನಾಮೆ ಪಡೆದುಕೊಳ್ಳುವ ನಿರ್ದೇಶನವನ್ನು ಮುಖ್ಯಮಂತ್ರಿ ಕಚೇರಿಗೆ ರವಾನಿಸಿತು.



ಮುಖ್ಯಮಂತ್ರಿ ಅವರು ಹಿಂದೆ ಮುಂದೆ ನೋಡದೆ ರಾಜಣ್ಣ ರಾಜೀನಾಮೆಗೆ ಸೂಚನೆಯನ್ನು ನೀಡಿದರೆನ್ನಲಾಗಿದ್ದು, ತಕ್ಷಣ ರಾಜಣ್ಣ ಅವರು ಪದತ್ಯಾಗಕ್ಕೆ ಮುಂದಾಗದ ಕಾರಣ ಮುಖ್ಯಮಂತ್ರಿಯವರು ರಾಜಣ್ಣ ಅವರನ್ನು ಸಂಪುಟದಿಂದ ಕೈ ಬಿಡುವ ನಿರ್ಧಾರವನ್ನು ಪ್ರಕಟಿಸಿದರು. ಬಳಿಕ ಎಚ್ಚೆತ್ತುಕೊಂಡ ರಾಜಣ್ಣ ಅವರು ತಮ್ಮ ಪುತ್ರ ವಿಧಾನ ಪರಿಷತ್ ಸದಸ್ಯ ರಾಜೇಂದ್ರ, ಅವರ ಮೂಲಕ ತಮ್ಮ ಪದತ್ಯಾಗ ಪತ್ರವನ್ನು ಮುಖ್ಯಮಂತ್ರಿ ಅವರಿಗೆ ತಲುಪಿಸಿದರೆಂದು ತಿಳಿದು ಬಂದಿದೆ.

ವಿಧಾನಸಭೆ ಅಧಿವೇಶನದ ಹೊತ್ತಿನಲ್ಲೇ ಮಾಧ್ಯಮಗಳ ಮೂಲಕ ರಾಜಣ್ಣ ಅವರು ಸಂಪುಟದಿಂದ ಹೊರ ಬಿದ್ದ ಮಾಹಿತಿ ಪಡೆದುಕೊಂಡ ಬಿಜೆಪಿ ಸದಸ್ಯರು ರಾಜಣ್ಣ ಅವರ ರಾಜೀನಾಮೆ ಹಾಗು ಸಕಾರಣವನ್ನು ಸರ್ಕಾರ ನೀಡಬೇಕೆಂಬ ಆಗ್ರಹಕ್ಕೆ ಮುಂದಾದರು.

### ನನ್ನ ಮನಸ್ಸಿಗೂ ನೋವಾಗಿದೆ



ರಾಜಣ್ಣ ಅವರಿಂದ ಏಕೆ ರಾಜೀನಾಮೆ ಪಡೆಯಲಾಗಿದೆಯೋ ಗೊತ್ತಿಲ್ಲ, ಇದು ಪಕ್ಷದ ನಿರ್ಧಾರ. ಬೇರೆ ಯಾವುದೇ ವಿಚಾರ ನನಗೆ ಗೊತ್ತಿಲ್ಲ. ಶಾಸಕರು ಮತ್ತು ಮಂತ್ರಿಗಳು ನನ್ನ ವ್ಯಾಪ್ತಿಗೆ ಬರುವುದಿಲ್ಲ. ಶಾಸಕಾಂಗ ಪಕ್ಷದ ನಾಯಕರು ಮುಖ್ಯಮಂತ್ರಿಯಾಗಿರುತ್ತಾರೆ. ಹಾಗಾಗಿ ಈ ವಿಚಾರ ಅವರಿಗೆ ಸಂಬಂಧಿಸಿದ್ದು ನನಗಲ್ಲ. ರಾಜಣ್ಣ ಮತ್ತು ನಾನು ಕಳೆದ 25 ವರ್ಷ ಗಳಿಂದ ಸ್ನೇಹಿತರು, ನಮ್ಮ ನಡುವೆ ಉತ್ತಮ ಬಾಂಧವ್ಯವಿದೆ, ಅವರ ರಾಜೀನಾಮೆಯಿಂದ ನನ್ನ ಮನಸ್ಸಿಗೂ ನೋವಾಗಿದೆ, ಆದರೇನು ಮಾಡೋದು ಇದು ಪಕ್ಷದ ತೀರ್ಮಾನ.

–ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ

ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರು, ರಾಜಣ್ಣ ಅವರ ರಾಜೀನಾಮೆ ಪ್ರಸಂಗವನ್ನು ಪ್ರಸ್ತಾಪಿಸಿ ರಾಜಣ್ಣ ಅವರನ್ನು ಯಾವ ಕಾರಣಕ್ಕೆ ಸಂಪುಟದಿಂದ ಹೊರಗಿಡಲಾಯಿತು, ಅವರು ಯಾವ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದಾರೆ, ಸದಾ ಮುಖ್ಯಮಂತ್ರಿ ಅವರ ಬೆನ್ನಿಗೆ ನಿಲ್ಲುತ್ತಿದ್ದ ಕಾರಣಕ್ಕೆ ಅವರನ್ನು ವಜಾ ಮಾಡಲಾಯಿತೇ, ಹೀಗೆ ಹಲವು ಪ್ರಶ್ನೆಗಳನ್ನು ಒಡ್ಡಿ ಉತ್ತರ ಬಯಸಿದರು.

ಆ ಸಂದರ್ಭದಲ್ಲಿ ಸದನದಲ್ಲಿಯೇ ಇದ್ದ ರಾಜಣ್ಣ ಅವರು, ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿ, ಇಂತಹ ಕೀಳುಮಟ್ಟದ ರಾಜಕಾರಣವನ್ನು ನೀವು ಮಾಡುವುದು ಬೇಡ. ನಾನು ರಾಜೀನಾಮೆ ಕೊಟ್ಟಿದ್ದೇನೋ, ಬಿಟ್ಟಿದ್ದೇನೋ. ಆ ವಿಚಾರವನ್ನು ಮುಖ್ಯಮಂತ್ರಿ ಅವರು ತಿಳಿಸುತ್ತಾರೆಂದು ಹೇಳಿದರು.

## ವಜಾದ ಹಿಂದೆ ದೊಡ್ಡ ಪಿತೂರಿ ಇದೆ : ರಾಜಣ್ಣ

### ಸಚಿವರು, ಶಾಸಕರೊಂದಿಗೆ ಹೈಕಮಾಂಡ್ ಭೇಟಿ ನಿರ್ಧಾರ



• ಪ್ರಜೋದಯ ವರದಿ

**ಬೆಂಗಳೂರು:** ನನ್ನನ್ನು ಸಂಪುಟದಿಂದ ವಜಾಗೊಳಿಸಿರುವ ಹಿಂದೆ ದೊಡ್ಡ ಪಿತೂರಿ ಮತ್ತು ಷಡ್ಯಂತ್ರವಿದೆ. ಏನೇನಾಗಿದೆ, ಯಾರು ಹಿಂದೆ ಇದ್ದಾರೆ ಎಲ್ಲಾ ಗೊತ್ತಿದೆ. ಕಾಲ ಬಂದಾಗ ತಿಳಿಸುತ್ತೇನೆಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರು ಅಸಮಾಧಾನ ಹೊರ ಹಾಕಿದ್ದಾರೆ.

ಸಚಿವ ಸ್ಥಾನದಿಂದ ವಜಾಗೊಳಿಸಿದ ಬೆನ್ನಲ್ಲೇ ರಾಜಣ್ಣ ಅವರು ತಮ್ಮ ಆಪ್ತ ಸಚಿವರು, ಶಾಸಕರ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅವರ ಗೃಹ ಕಚೇರಿ ಕೃಷ್ಣಾದಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಮಾಜಿಯಾಗಿ ನಿಮ್ಮ ಮುಂದೆ ಮಾತನಾಡುತ್ತಿದ್ದೇನೆ. ಮಾಜಿ ಸಚಿವ ಎಂದು ಕರೆಸಿಕೊಳ್ಳಲು ಸಂತೋಷವಾಗುತ್ತಿದೆ. ಮಂತ್ರಿಯಾಗಲು ಸಿದ್ದರಾಮಯ್ಯನವರು ಅವಕಾಶ ಕೊಟ್ಟಿದ್ದರು. ಇಲ್ಲಿಯವರೆಗೆ ಅವಕಾಶ ನೀಡಿದ್ದಕ್ಕೆ ನಾನು ಧನ್ಯವಾದ ತಿಳಿಸಲು ತೆರಳಿದ್ದೆ. ವಜಾಗೊಳಿಸಿದ ನಿರ್ಧಾರ ಪ್ರಕಟವಾದ ನಂತರ ಮುಖ್ಯಮಂತ್ರಿಯವರು ಮಾತನಾಡ ಬಹುದೆಂದು ಭಾವಿಸಿದ್ದೆ. ಅವರು ಪ್ರತಿಕ್ರಿಯೆ ನೀಡಿದ ಬಳಿಕ ನಾನು ಮಾತನಾಡಬೇಕು ಎಂದುಕೊಂಡಿದ್ದೆ. ಆದರೆ, ಅವರು ಯಾವುದೇ ಪ್ರತಿ ಕ್ರಿಯೆ ನೀಡದ ಕಾರಣ ಈಗ ನಾನೇ ಮಾತನಾಡುತ್ತಿದ್ದೇನೆ ಎಂದರು.

ರಾಹುಲ್ ಗಾಂಧಿ, ವೇಣುಗೋಪಾಲ್ ಅವರಿಗೆ ನನ್ನ ಬಗ್ಗೆ ತಪ್ಪು ಗ್ರಹಿಕೆಯಾಗಿದೆ. ತಪ್ಪು ಗ್ರಹಿಕೆಯನ್ನು ಸರಿಪಡಿಸುವ ಕಾರ್ಯ ಮಾಡಲಿದ್ದೇನೆ. ಹೀಗಾಗಿ ಮನವರಿಕೆ ಮಾಡಿಸಲು ಹಿರಿಯ ಸಚಿವರು, ಶಾಸಕರೊಂದಿಗೆ ದೆಹಲಿಗೆ ಹೋಗಲಿದ್ದೇನೆಂದು ಹೇಳಿದರು.

## ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾರ್ಯಾರಂಭಕ್ಕೆ ಆಗ್ರಹ

### ಜನಪರ ಚಳುವಳಿ, ದಲಿತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ಹಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಶೀಘ್ರ ಕಾರ್ಯಾರಂಭಕ್ಕೆ ಒತ್ತಾಯಿಸಿ ಜಿಲ್ಲಾ ಜನಪರ ಚಳುವಳಿಗಳ ಒಕ್ಕೂಟ, ದಲಿತ ಸಂಘಟನೆಗಳ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಯಿತು.



ಜಿಲ್ಲೆಯಲ್ಲಿ ಎಲ್ಲಾ ವಯಸ್ಸಿನವರಲ್ಲಿ ಹೃದಯಾಘಾತ, ಹಠಾತ್ ಸಾವುಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಇಂದಿನ ಜನಾರೋಗ್ಯ ತುರ್ತುಸ್ಥಿತಿಯಲ್ಲಿರುವುದರ ಮುನ್ಸೂಚನೆ ಯಾಗಿದೆ. ರಕ್ತದೊತ್ತಡ, ಮಧುಮೇಹ, ಥೈರಾಯ್ಡ್, ಸ್ಥೂಲಕಾಯತೆ ಮುಂತಾದ ದೈಹಿಕ ವ್ಯತ್ಯಾಸಗಳು ತೀವ್ರವಾಗಿ ಮತ್ತು ಆತಂಕಕಾರಿ ಮಟ್ಟದಲ್ಲಿ ಹೆಚ್ಚಾಗುತ್ತಿವೆ. ಇದರಿಂದಾಗಿ ಹೃದ್ರೋಗ, ಪಾರ್ಶ್ವವಾಯು, ಕಿಡ್ನಿ ಸಮಸ್ಯೆ, ಮೆದುಳು ಮತ್ತು ನರರೋಗ, ಕ್ಯಾನ್ಸರ್ ಮತ್ತಿತರೆ ಮಾರಣಾಂತಿಕ ಖಾಯಿಲೆಗಳು ಹೆಚ್ಚಾಗುತ್ತಿವೆ ಎಂದು ತಿಳಿಸಿದರು.

ಜಿಲ್ಲೆಯ ಜನಾರೋಗ್ಯದ ಸ್ಥಿತಿ ಹಾಗೂ ಜಿಲ್ಲೆಯ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯ ನಡುವಿನ ಅಂತರಗಳು ಹೆಚ್ಚಾಗಿವೆ. ಹೀಗಾಗಿ ಸೂಕ್ತ ಸಮಯದಲ್ಲಿ ಖಾಯಿಲೆಗಳ ಪತ್ತೆ, ಸೂಕ್ತ ತಪಾಸಣೆ ಮತ್ತು ಚಿಕಿತ್ಸೆ ದೊರೆಯದೆ ಮರಣಗಳು ಹೆಚ್ಚಾಗುತ್ತಿವೆ. ಜೊತೆಗೆ ಖಾಸಗಿಯಲ್ಲಿ ದುಬಾರಿಯಾದ ತಪಾಸಣೆ ಮತ್ತು ಚಿಕಿತ್ಸೆಗೆ ಒಳಗಾದವರು ಅತ್ಯಂತ ಆರ್ಥಿಕ ದುಸ್ಥಿತಿಗೆ ತಳ್ಳಲ್ಪಟ್ಟಿರುವ ಉದಾಹರಣೆಗಳು ಸಾಕಷ್ಟಿವೆ. ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯಕ್ಕಾಗಿ ಜನರು ಖಾಸಗಿ ವ್ಯವಸ್ಥೆಯನ್ನು ಅವಲಂಬಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಸಾಮಾಜಿಕವಾಗಿ ಆರ್ಥಿಕವಾಗಿ ದಮನಕೊಳಗಾಗಿರುವ ದಲಿತ ಸಮುದಾಯದವರು ತೀವ್ರ ಶೋಷಣೆಗೆ ಒಳಗಾಗುತ್ತಿದ್ದಾರೆಂದು ಹೇಳಿದರು.

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ (ಹಿಮ್ಸ್) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡದ ತುರ್ತು ಕಾಮಗಾರಿ, ವೈದ್ಯಕೀಯ ಯಂತ್ರೋಪಕರಣ, ತಜ್ಞ ವೈದ್ಯರು, ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿ ನೇಮಕಾತಿಗಾಗಿ ಸದ್ಯದ ಅಂದಾಜಿನ ಪ್ರಕಾರ ಕನಿಷ್ಠ 60 ಕೋ.ರೂ. ಅನುದಾನದ ಅಗತ್ಯವಿದೆ. ಹೃದ್ರೋಗ ಶಸ್ತ್ರಚಿಕಿತ್ಸೆ, ನರರೋಗ, ನರರೋಗ

» ನಾಲ್ಕನೇ ಪುಟದಲ್ಲಿ

## ನನ್ನ ಕ್ಷೇತ್ರಕ್ಕೆ ಒಂದೂ ಮನೆ ನೀಡಿಲ್ಲ: ಸಿಮೆಂಟ್ ಮಂಜು

### ಸಚಿವರು ಸರಿಯಾದ ಉತ್ತರ ನೀಡಿಲ್ಲ | ಮುಂಗಾರು ಅಧಿವೇಶನದಲ್ಲಿ ಅಸಮಾಧಾನ

• ಪ್ರಜೋದಯ ವರದಿ

**ಹಾಸನ:** ಸಕಲೇಶಪುರ-ಆಲೂರು ವಿಧಾನ ಸಭಾ ಕ್ಷೇತ್ರಕ್ಕೆ ಈವರೆಗೆ ಒಂದು ಮನೆಯನ್ನೂ ಸರ್ಕಾರ ನೀಡಿಲ್ಲ. ಶೀಘ್ರವಾಗಿ ಈ ಕುರಿತು ಸಚಿವರು ಗಮನಹರಿಸಿ ವಸತಿ ರಹಿತರಿಗೆ ಮನೆಗಳನ್ನು ನೀಡಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ಮುಂಗಾರು ಅಧಿವೇಶನದಲ್ಲಿ ಒತ್ತಾಯಿಸಿದರು.



2022-23ನೇ ಸಾಲಿನಲ್ಲಿ 1,500 ಮನೆಗಳು ನನ್ನ ಕ್ಷೇತ್ರಕ್ಕೆ ಹಂಚಿಕೆಯಾಗಿತ್ತು. ಅದನ್ನು ಈ ಸರ್ಕಾರ ಯಾವ ಕಾರಣಕ್ಕೆ ಹಿಂಪಡೆದಿದೆ ಎಂಬುದು ಗೊತ್ತಿಲ್ಲ. ಈ ಬಗ್ಗೆ ಹಲವು ಬಾರಿ ಸಚಿವರ ಗಮನಕ್ಕೆ ತಂದಿದ್ದೇನೆ. ನಾನು ಶಾಸಕನಾಗಿ ಎರಡು ವರ್ಷವಾದರೂ ಒಬ್ಬರಿಗೂ ಒಂದು ಮನೆ ನೀಡಲು ಸಾಧ್ಯವಾಗಿಲ್ಲ. ನಮ್ಮ ಭಾಗದಲ್ಲಿ ಕೂಲಿ ಕಾರ್ಮಿಕರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ, ಹೆಚ್ಚು ಮಳೆ ಬೀಳುವ ಪ್ರದೇಶವಾಗಿರುವುದರಿಂದ ಮನೆ ಕುಸಿತವಾದರೂ ಇದುವರೆಗೂ ಮನೆ ನೀಡಿಲ್ಲವೆಂದು ಹೇಳಿದರು.

ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿ 2024-25ನೇ ಸಾಲಿನಲ್ಲಿ 7,02,731 ಮನೆಗಳ ಗುರಿ ನೀಡಲಾಗಿದೆ ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರ ವಸತಿ ಯೋಜನೆಯಡಿ 2,88,443 ಮನೆಗಳನ್ನು ಮಂಜೂರು ಮಾಡಲಾಗಿದೆ ಎಂದು ಹೇಳಲಾಗಿದೆ. ಆದರೆ, ನನಗೆ ಗೊತ್ತಿರುವ ಹಾಗೆ ನನ್ನ ಕ್ಷೇತ್ರಕ್ಕೆ ಒಂದು ಮನೆಯನ್ನೂ ನೀಡಿಲ್ಲ. ಹಾಸನ ಜಿಲ್ಲೆಗೆ ವಿವಿಧ ವಸತಿ ಯೋಜನೆಯಡಿ 9,617 ನೀಡಲಾಗಿದೆ ಎಂದು ತಿಳಿಸಿದ್ದಾರೆ. ನಾನು ಅದೇ ಜಿಲ್ಲೆಯಲ್ಲಿದ್ದೇನೆ, ಒಂದು ಮನೆಯನ್ನು ನೀಡಿರುವುದು ನನ್ನ ಗಮನಕ್ಕೆ ಬಂದಿಲ್ಲ, ಎಲ್ಲಿಗೆ ಕೊಟ್ಟಿದ್ದಾರೆ ಗೊತ್ತಿಲ್ಲ ಎಂದರು.

ಕೊಳಚೆ ನಿರ್ಮೂಲನಾ ಮಂಡಳಿಯಿಂದ ಸಕಲೇಶಪುರ ಪಟ್ಟಣ ವ್ಯಾಪ್ತಿಯ ಪೌರ ಕಾರ್ಮಿಕರಿಗಾಗಿ 70 ರಿಂದ 100 ಮನೆಗಳನ್ನು ಕಳೆದ 9 ವರ್ಷಗಳಿಂದ ನಿರ್ಮಾಣ ಮಾಡುತ್ತಿದ್ದರೂ ಇದುವರೆಗೂ ಕಾಮಗಾರಿ ಮುಗಿದಿಲ್ಲ. ಹೀಗಾಗಿ ಪೌರಕಾರ್ಮಿಕರು ಗುಡಿಸಲುಗಳಲ್ಲಿ ವಾಸಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಶೇ.90ರಷ್ಟು ಕಾಮಗಾರಿ ಮುಗಿದಿದೆ. ಕೂಡಲೇ ಕಾಮಗಾರಿ ಪೂರ್ಣಗೊಳಿಸಿ ಪೌರಕಾರ್ಮಿಕರಿಗೆ ಮನೆ ಹಸ್ತಾಂತರಿಸಬೇಕು. ನಾನು ಕೇಳಿರುವ ಯಾವುದೇ ಪ್ರಶ್ನೆಗೆ ಸರಿಯಾದ ಉತ್ತರವನ್ನು ಸಂಬಂಧಪಟ್ಟ ಸಚಿವರು ನೀಡಿಲ್ಲವೆಂದು ದೂರಿದರು.

**ಸರ್ಕಾರ ನೀಡಿದ ಮನೆ ಒಡೆದು ಹಾಕಿದ್ದಾರೆ**

ಪ್ರಸ್ತುತ ಮನೆಗಳನ್ನೇ ನೀಡುತ್ತಿಲ್ಲ, ಹೀಗಿರುವಾಗ ಸರ್ಕಾರ ನೀಡಿರುವ ಅನುದಾನದಲ್ಲಿ ನಿರ್ಮಾಣ ಮಾಡಿರುವ ಮನೆಯನ್ನು ಯಸಳೂರು ವಲಯ ಅರಣ್ಯಾಧಿಕಾರಿ ಕೃಷ್ಣ ಎಂಬುವವರು ನೋಟೀಸ್ ನೀಡದೆ ಜೆಸಿಬಿಯಿಂದ ನೆಲಸಮಗೊಳಿಸಿ, ದರ್ಪ ತೋರಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ನಿರಾಶ್ರಿತರಾಗಿರುವ ಕುಟುಂಬಕ್ಕೆ ಬದಲಿ ವ್ಯವಸ್ಥೆ ಕಲ್ಪಿಸಿಕೊಡಬೇಕೆಂದು ಆಗ್ರಹಿಸಿದರು.

### ಅವಶ್ಯ ಇರುವಷ್ಟು ಮನೆ ನೀಡುತ್ತೇವೆ



ಜಿಲ್ಲಾ ಉಸ್ತುವಾರಿ ಸಚಿವರೂ ಆದ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಪ್ರತಿಕ್ರಿಯಿಸಿ, ಹೆಚ್ಚಿನ ಮನೆಗಳನ್ನು ನೀಡಬೇಕೆಂದು ಶಾಸಕರು ಬೇಡಿಕೆ ಇಟ್ಟಿದ್ದಾರೆ. ಸರ್ಕಾರ ಮನೆಗಳನ್ನು ನೀಡುತ್ತದೆ. ಈ ಹಿಂದೆ ನೀಡಿದ್ದ ಮನೆಗಳಿಗೆ ಅನುದಾನ ಒದಗಿಸಲಾ ಗುತ್ತಿದೆ. ಮುಂದಿನ ದಿನಗಳಲ್ಲಿ ಹೊಸ ಮನೆಗಳನ್ನು ಮುಂಜೂರು ಮಾಡಲು ಸರ್ಕಾರ ಚಿಂತಿಸಿದೆ. ಪೂರ್ಣ ಬೇಡಿಕೆ ಈಡೇರಿಸಲು ಸಾಧ್ಯವಾಗದಿದ್ದರೂ ಅವಶ್ಯ ಇರುವಷ್ಟು ಮನೆಗಳನ್ನು ನೀಡಲಾಗುವುದು. ಪೌರಕಾರ್ಮಿಕರ ಮನೆ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಹಿಂದೆ 50:50 ಅನುಪಾತದಲ್ಲಿ ಮನೆ ನಿರ್ಮಾಣಕ್ಕೆ ತೀರ್ಮಾನಿಸಲಾಗಿತ್ತು. ನಮ್ಮ ಮುಖ್ಯಮಂತ್ರಿ ಮನಸ್ಸು ಮಾಡಿ, ಫಲಾನುಭವಿಗಳು 4 ಲ.ರೂ. ಕಟ್ಟಬೇಕಾಗಿರುವುದನ್ನು 1 ಲ.ರೂ. ಗೆ ಇಳಿಸಿ, ಹೆಚ್ಚಿನ ಹೊರೆಯನ್ನು ಸರ್ಕಾರವೇ ಹೊತ್ತಿಕೊಂಡಿದೆ. ಆದಷ್ಟು ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಿ ಮನೆಗಳನ್ನು ಹಸ್ತಾಂತರ ಮಾಡಲಾಗುವುದೆಂದು ಭರವಸೆ ನೀಡಿದರು. ಅದೇ ರೀತಿ ಮನೆ ಒಡೆದು ಹಾಕಿರುವ ಬಗ್ಗೆ ಜಿಲ್ಲಾಧಿಕಾರಿಯಿಂದ ಮಾಹಿತಿ ತರಿಸಿಕೊಳ್ಳುತ್ತೇನೆ, ಜಿಲ್ಲೆಗೆ ಭೇಟಿ ನೀಡಿ ಆ ಬಗ್ಗೆ ಪರಿಶೀಲಿಸುತ್ತೇನೆಂದು ತಿಳಿಸಿದರು.

## ಅಂಗನವಾಡಿ ನೇಮಕ: ಆಕ್ಷೇಪಣೆ ಸಲ್ಲಿಸಲು ಅವಕಾಶ

### ಪ್ರಜೋದಯ ವರದಿ ಬಳಿಕ ಎಚ್ಚೆತ್ತ ಇಲಾಖೆ | ಲೋಪ ತಡೆಗೆ ಮುಂದಾದ ಅಧಿಕಾರಿಗಳು

• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ಅಂಗನವಾಡಿ ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯಲ್ಲಿ ಅರ್ಜಿದಾರರಿಗೆ ಅನ್ಯಾಯವಾಗಿದ್ದರೆ ಅಂತಹವರು ನಮ್ಮ ಗಮನಕ್ಕೆ ತರಬಹುದೆಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಧರಣಿ ಕುಮಾರ್ ಅವರು ತಿಳಿಸಿದ್ದಾರೆ.

ಆ.11ರ ಸೋಮವಾರ ಪ್ರಜೋದಯ ಪತ್ರಿಕೆಯಲ್ಲಿ ಪ್ರಕಟವಾದ ಅಂಗನವಾಡಿ ಸಹಾಯಕರ ನೇಮಕಾತಿಯಲ್ಲಿ ಅವ್ಯವಹಾರ ವರದಿಗೆ ಪ್ರತಿಕ್ರಿಯಿಸಿದ ಅವರು, ಕಾನೂನು ಉಲ್ಲಂಘಿಸಿ ನೇಮಕ ಪ್ರಕ್ರಿಯೆ ನಡೆಯಲು ಸಾಧ್ಯವಿಲ್ಲ. ವಿಶೇಷ ಆಸಕ್ತಿ ವಹಿಸಿ ಅರ್ಹರಿಗೆ ಅವಕಾಶ ಸಿಗಬೇಕೆಂದು ನಿಗಾ ವಹಿಸಿ ನೇಮಕ ಪ್ರಕ್ರಿಯೆ ನಡೆಸಲಾಗುತ್ತಿದೆ. ಏನೇ ಲೋಪದೋಷಗಳಾಗಿದ್ದರೂ ಸರಿಪಡಿಸಿಕೊಳ್ಳಲಾಗುವುದೆಂದರು.

ಜುಲೈ 28 ರಂದು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿ ಸಭೆಯಲ್ಲಿ ತೀರ್ಮಾನಿಸಿದಂತೆ ಸಕಲೇಶಪುರದ ಆಜಾದ್ ರಸ್ತೆ, ಕುಶಾಲ ನಗರ, ಬೇಲೂರಿನ ದೇವಾಂಗ ಬೀದಿ, ಆಲೂರು ತಾಲ್ಲೂಕಿನ ಮಗ್ಗೆ, ಅರಸೀಕೆರೆಯ ವಾರ್ಡ್ ನಂ. 6, ಜಯ ಚಾಮರಾಜಪುರ ಮತ್ತು ಜೇನುಕಲ್ ನಗರ 1 ಅಂಗನವಾಡಿ ಹುದ್ದೆಗೆ ಅಲ್ಪಸಂಖ್ಯಾತ ಸಮುದಾಯದ ಭಾಷೆ ಬಲ್ಲವರನ್ನು ಆಯ್ಕೆ ಮಾಡಿಕೊಳ್ಳಬೇಕಿದೆ. ಮೆರಿಟ್ ಆಧಾರ ಹಾಗು ಸಮುದಾಯದ ಭಾಷೆ ಬಲ್ಲವರೇ ಎಂಬುದನ್ನು ಪರಿಶೀಲಿಸಲು ಉಪ ಸಮಿತಿ ರಚಿಸಲಾಗಿದೆ.

> **ಅಂಗನವಾಡಿ ಸಹಾಯಕರ ನೇಮಕಾತಿ ವಿಚಾರದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಲಾಗುತ್ತಿದೆ. ವಯೋಮಿತಿ 35 ಎಂದು ಸ್ಪಷ್ಟಪಡಿಸಲಾಗಿದೆ. ವಾಸಸ್ಥಳ ದೃಢೀಕರಣ ಪ್ರಮಾಣ ಪತ್ರಕ್ಕೂ ನಿಬಂಧನೆ ಇದೆ. ದಾಖಲಾತಿ ಸರಿಯಿದ್ದರೆ ಅಂತವರ ಅರ್ಜಿ ತಿರಸ್ಕರಿಸಲು ಸಾಧ್ಯವಿಲ್ಲ. ಈ ಸಂಬಂಧ ಏನೇ ಗೊಂದಲಗಳಿದ್ದರೂ ದೂರು ಸಲ್ಲಿಸಬಹುದು.**
>
> **-ಧರಣಿಕುಮಾರ್,** ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಉಪ ಸಮಿತಿಯ ಅಧ್ಯಕ್ಷ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ನಿರೂಪಣಾಧಿಕಾರಿ, ಒಬ್ಬ ಉರ್ದು ಶಿಕ್ಷಕಿ ಸದಸ್ಯರಾಗಿ ಹಾಗು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿದ್ದಾರೆ. ನೇಮಕ ಪ್ರಕ್ರಿಯೆಯಲ್ಲಿ ತಾರತಮ್ಯ ಮಾಡಲು ಸಾಧ್ಯವೇ ಇಲ್ಲವೆಂದು ಅವರು ಪ್ರತಿಪಾದಿಸಿದರು.

» ನಾಲ್ಕನೇ ಪುಟದಲ್ಲಿ

## ರಾಹುಲ್ ಷಡ್ಯಂತ್ರಕ್ಕೆ ರಾಜಣ್ಣ ಬಲಿ

• ಪ್ರಜೋದಯ ವರದಿ

**ನವದೆಹಲಿ:** ಕಾಂಗ್ರೆಸ್ ಹೈಕಮಾಂಡ್ ಜುಟ್ಟು ಜನಿವಾರ ಇಲ್ಲದ ಹಾಗೂ ದೇಶದ ವ್ಯವಸ್ಥೆ ಗೊತ್ತಿಲ್ಲದ ನಾಯಕನಿಗೆ ಪಕ್ಷದ ನೇತೃತ್ವ ನೀಡಿದೆ. ರಾಹುಲ್ ಗಾಂಧಿ ಷಡ್ಯಂತ್ರಕ್ಕೆ ಸತ್ಯವಂತ ಕೆ.ಎನ್.ರಾಜಣ್ಣ ಬಲಿಯಾಗಿದ್ದಾರೆಂದು ಕೇಂದ್ರ ಸಚಿವ ವಿ.ಸೋಮಣ್ಣ ಅವರು ಹೇಳಿದರು.

ಸೋಮವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಾಜಣ್ಣ ಅವರು ಸಿದ್ದರಾಮಯ್ಯ ಕಟ್ಟಾ ಬೆಂಬಲಿಗ. ಅವರನ್ನು ಸಿದ್ದರಾಮಯ್ಯ ನಡುನೀರಿನಲ್ಲಿ ಕೈಬಿಟ್ಟರು. ಇದು ಇತರ ಸಚಿವರಿಗೆ ಎಚ್ಚರಿಕೆಯ ಗಂಟೆ. ಕಪ್ಪ ಕಾಣಿಕೆ ಕೊಟ್ಟು ಸರಿಯಾಗಿ ಇರದಿದ್ದರೆ ಎಲ್ಲರಿಗೂ ಇದೇ ಗತಿ ಎಂದರು.

## ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಖಂಡನೀಯ

### ಇಂದು ನಗರದಲ್ಲಿ ಪ್ರತಿಭಟನೆ: ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಹಾಸನ:** ಧರ್ಮಸ್ಥಳ ದೇವಾಲಯ ಹಿಂದೂಗಳಿಗೆ ಶ್ರದ್ಧಾ ಕೇಂದ್ರ. ಇಡೀ ದೇಶ, ರಾಜ್ಯದಲ್ಲಿ ಅಪಾರ ಭಕ್ತರನ್ನು ಹೊಂದಿರುವ ಕ್ಷೇತ್ರ. ಸೌಜನ್ಯ ಪ್ರಕರಣದಲ್ಲಿ ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡುತ್ತಿರುವುದು ಖಂಡನೀಯವೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಸೌಜನ್ಯಗೆ ಆಗಿರುವ ಅನ್ಯಾಯಕ್ಕೆ ನ್ಯಾಯ ಸಿಗಬೇಕು. ಆದರೆ, ದೇವಾಲಯದ ಮೇಲೆ ನಿರಂತರ ಅಪಪ್ರಚಾರ ಮಾಡುತ್ತಿರುವುದು ಸರಿಯಲ್ಲ. ಧರ್ಮಸ್ಥಳಕ್ಕೆ ಅಪಾರವಾದ ಭಕ್ತರ ಸಂಖ್ಯೆ ಇದೆ, ಧರ್ಮಸ್ಥಳದ ಭಕ್ತಾಧಿಗಳಲ್ಲಿ ನಾನೂ ಕೂಡ ಒಬ್ಬ. ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರ ವಿರುದ್ಧ ಮಂಗಳವಾರ ನಗರದಲ್ಲಿ ಪ್ರತಿಭಟನೆ ಹಮ್ಮಿಕೊಂಡಿದ್ದು, ವಿವಿಧ ಸಂಘಟನೆಗಳು, ಭಕ್ತರು ಭಾಗವಹಿಸಲಿದ್ದಾರೆಂದರು.

ಧರ್ಮಸ್ಥಳದ ಮಂಜುನಾಥ ಸ್ವಾಮಿಗೆ ಯಾವುದೇ ಕಳಂಕ ಬರದ ರೀತಿಯಲ್ಲಿ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ. ಈ ದೇಶದ ಕಾನೂನಿಗೆ ಗೌರವ ಕೊಡಬೇಕು. ಅನಾಮಿಕ ವ್ಯಕ್ತಿ ಹೇಳಿದ ಕಡೆ ಎಸ್ಐಟಿ ಉತ್ಖನನ ನಡೆಸಿದೆ, ಧರ್ಮಸ್ಥಳದ ಮಂಜುನಾಥಸ್ವಾಮಿಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ. ಕೆಲವೊಂದು ಶ್ರದ್ಧಾಕೇಂದ್ರದ ಮೇಲೆ ನಿರಂತರವಾಗಿ ಅಪಪ್ರಚಾರ ಮಾಡಲಾಗುತ್ತಿದೆ. ಹಿಂದೂಗಳ ಭಾವನೆಗೆ ಧಕ್ಕೆ ತರುವ ಕೆಲಸ ಮಾಡಿದರೆ ತಪ್ಪು ಎಂದರು.

ದೇಶದ ಕಾನೂನಿಗೆ ಗೌರವ ಕೊಡಬೇಕಿರುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಅನಾಮಿಕ ವ್ಯಕ್ತಿ ಹೇಳಿದಂತೆ ಸರ್ಕಾರ ಎಸ್ಐಟಿ ರಚಿಸಿ, ಹಲವು ಜಾಗಗಳಲ್ಲಿ ಪರೀಕ್ಷೆ ನಡೆಯುತ್ತಿದೆ. ಅಲ್ಲಿ ಏನು ಸಿಕ್ಕಿದೆ ಎಂಬುದು ಗೊತ್ತಿದೆ. ಈ ಬಗ್ಗೆ ಪರಿಹಾರ, ನ್ಯಾಯ ಒದಗಿಸಲು ನ್ಯಾಯಾಲಯವಿದೆ. ಧರ್ಮಸ್ಥಳ ಮಂಜುನಾಥಸ್ವಾಮಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧವಿಲ್ಲ. ಗಲಾಟೆ-ಘರ್ಷಣೆಗೆ ಅವಕಾಶ ನೀಡಬಾರದು. ಈ ದೇಶದ ಕಾನೂನು ಬಲಿಷ್ಠವಾಗಿದೆ. ಯಾರೇ ತಪ್ಪು ಮಾಡಿದ್ದರೂ ಅವರಿಗೆ ಶಿಕ್ಷೆಯಾಗುತ್ತದೆ ಎಂದು ಹೇಳಿದರು.

## ಆಟೋ ಚಾಲಕನ ಮೇಲೆ ಮಾರಣಾಂತಿಕ ಹಲ್ಲೆ

• ಪ್ರಜೋದಯ ವರದಿ

**ಸಕಲೇಶಪುರ:** ಕ್ಷುಲ್ಲಕ ಕಾರಣಕ್ಕಾಗಿ ಆಟೋ ಚಾಲಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.

ತಾಲ್ಲೂಕಿನ ಜಾನೆಕೆರೆ ಗ್ರಾಮದ ಪುಟ್ಟರಾಜು ಎಂಬುವವರ ಮೇಲೆ ಹಲ್ಲೆ ನಡೆದಿದೆ. ಭಾನುವಾರ ರಾತ್ರಿ ಪಟ್ಟಣದಲ್ಲಿ ಬಾಡಿಗೆ ಮಾಡುತ್ತಿದ್ದ ವೇಳೆ, ಪ್ರವಾಸಿಗರೊಬ್ಬರು ಸ್ಥಳೀಯ ಲಾಡ್ಜ್‌ಗೆ ಹೋಗಲು ಮನವಿ ಮಾಡಿದ್ದರು. ಚಾಲಕ ಪ್ರವಾಸಿಗರನ್ನು ಲಾಡ್ಜ್‌ಗೆ ಬಿಟ್ಟು ಹೊರಟಿದ್ದನು. ನಂತರ ಲಾಡ್ಜ್ ಸಿಬ್ಬಂದಿ ಹಾಗು ಪ್ರವಾಸಿಗರ ನಡುವೆ ಹಣ ಪಾವತಿಸುವ ವಿಚಾರವಾಗಿ ಗಲಾಟೆ ನಡೆದಿದೆ. ಅದೇ ಸಮಯದಲ್ಲಿ ಅಲ್ಲಿಂದ ಹೋಗುತ್ತಿದ್ದ ಆಟೋ ಚಾಲಕ ಪುಟ್ಟರಾಜು, ಮಾನವೀಯತೆಯಿಂದ ಪ್ರವಾಸಿಗರ ಮನವಿಯನ್ನು ಲಾಡ್ಜ್ ಸಿಬ್ಬಂದಿಗೆ ತಿಳಿಸಿ ನಾನು ಸೋಮವಾರ ಲಾಡ್ಜ್ ಬಿಡುವ ವೇಳೆ ಹಣವನ್ನು ಪೂರ್ತಿ ನೀಡುತ್ತೇನೆಂದು ತಿಳಿಸಲು ಸಹಕರಿಸಿದ್ದನು. ಅದಕ್ಕೆ ಕೋಪಗೊಂಡ ಲಾಡ್ಜ್ ಸಿಬ್ಬಂದಿ, ಆಟೋ ಚಾಲಕನೊಂದಿಗೆ ಜೋರಾಗಿ ವಾಗ್ವಾದ ನಡೆಸಿ ಕೊರಳು ಪಟ್ಟಿ ಹಿಡಿದು ಲಾಡ್ಜ್ ಹೊರಗೆ ಎಳೆದು ಹಲ್ಲೆ ನಡೆಸಿದ್ದಾರೆ. ಈ ವೇಳೆ ಚಾಲಕನ ಕೈಯಲ್ಲಿದ್ದ ಹಣ ಮತ್ತು ಮೊಬೈಲ್ ಕಳೆದು ಹೋಯಿತು ಎಂದು ತಿಳಿದುಬಂದಿದೆ. ಲಾಡ್ಜ್ ಸಿಬ್ಬಂದಿಯ ಗುಂಡಾವರ್ತನೆ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಘಟನೆಯ ಕುರಿತು ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಈ ಕುರಿತು ಆಟೋ ಚಾಲಕರು ನಗರ ಪೊಲೀಸ್ ಠಾಣೆಗೆ ದೂರು ನೀಡಿ ಹಲ್ಲೆ ನಡೆಸಿದ ದುಷ್ಕರ್ಮಿಗಳನ್ನು ಕೂಡಲೇ ಬಂಧಿಸಬೇಕು ಹಾಗು ಆಟೋ ಚಾಲಕರಿಗೆ ಭದ್ರತೆ ನೀಡಬೇಕೆಂದು ಮಲೆನಾಡು ಆಟೋ ಚಾಲಕರ ಸಂಘದ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ. ಗಾಯಾಳು ಪುಟ್ಟರಾಜು ಅವರನ್ನು ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಗೆ ದಾಖಲಿಸಲಾಗಿದೆ.

### ರಾತ್ರಿ ವೇಳೆ ಆನೆಗಳ ಚಲನವಲನ ಗಮನಿಸಿ ತುರ್ತು ಮಾಹಿತಿ ನೀಡಲು ಡ್ರೋನ್ ಸ್ಕ್ವಾಡ್ ನಿಯೋಜನೆ

## ಕಾಡಾನೆ ಹಾವಳಿ ತಡೆಗೆ ಥರ್ಮಲ್ ಡ್ರೋನ್ ಮೊರೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಕಾಡಾನೆ-ಮಾನವ ಸಂಘರ್ಷ ನಿಯಂತ್ರಣಕ್ಕೆ ತರುವ ನಿಟ್ಟಿನಲ್ಲಿ ನಸುಕಿನ ಜಾವ ಹಾಗು ರಾತ್ರಿ ವೇಳೆಯಲ್ಲಿ ಕಾಡಾನೆಗಳ ಚಲನವಲನ ಗಮನಿಸಿ ತುರ್ತಾಗಿ ಜನರಿಗೆ ಮಾಹಿತಿ ನೀಡಲು ಅರಣ್ಯ ಇಲಾಖೆ ಥರ್ಮಲ್ ಡ್ರೋನ್ ಮೊರೆ ಹೋಗಿದೆ.

ಜಿಲ್ಲೆಯಲ್ಲಿ ಹೆಚ್ಚಾಗಿ ಕಾಡಾನೆಗಳು ಮುಂಜಾನೆ ಮತ್ತು ಕತ್ತಲಿನ ವೇಳೆಯಲ್ಲಿ ಸಂಚಾರ ಮಾಡುವುದು ಕಂಡು ಬಂದಿತ್ತು. ರಾತ್ರಿ ವೇಳೆ ಮನೆ, ಗದ್ದೆ, ತೋಟಗಳಿಗೆ ದಾಳಿ ಇಡುತ್ತಿದ್ದ ಗಜಪಡೆ ಅಪಾರ ಪ್ರಮಾಣದ ಹಾನಿಯುಂಟು ಮಾಡುತ್ತಿತ್ತು. ಕತ್ತಲಿನ ವೇಳೆಯಲ್ಲೇ ಹೆಚ್ಚಿನ ಜನರು ಕಾಡಾನೆಗಳ ದಾಳಿಗೆ ಸಿಲುಕಿ ಜೀವ ಕಳೆದುಕೊಂಡಿದ್ದಾರೆ. ಈ ಹಿನ್ನಲೆ ರಾತ್ರಿ ವೇಳೆಯೂ ಕಾಡಾನೆಗಳ ಚಲನವಲನದ ಬಗ್ಗೆ ನಿಗಾವಹಿಸಿ, ಜನರಿಗೆ ಕ್ಷಣ ಕ್ಷಣದ ಮಾಹಿತಿ ನೀಡಲು ಈ ಡ್ರೋನ್ ಸ್ಕ್ವಾಡ್ ನೆರವಾಗಲಿದೆ.



» ನಾಲ್ಕನೇ ಪುಟದಲ್ಲಿ

### ಅರಣ್ಯ ಸಚಿವರಿಂದ ಚಾಲನೆ

ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ಭಾನುವಾರ ಜಿಲ್ಲೆಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಜಿಲ್ಲಾ ಆನೆ ಕಾರ್ಯಪಡೆಯ ಸಮಗ್ರ ತಂತ್ರಜ್ಞಾನ ಆಧಾರಿತ ಥರ್ಮಲ್ ಡ್ರೋನ್ ಸ್ಕ್ವಾಡ್‌ಗೆ ಚಾಲನೆ ನೀಡಿದರು. ಅರಣ್ಯ ಸಂರಕ್ಷಣಾಧಿಕಾರಿ ಏಡುಕೊಂಡಲು, ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವಿ.ಎಸ್. ಮೋಹನ, ಮಧುಸೂಧನ್ ಇತರರು ಹಾಜರಿದ್ದರು.

> **ಜಿಲ್ಲೆಯಲ್ಲಿ ಕತ್ತಲು ಸಮಯದಲ್ಲೇ ಹೆಚ್ಚಾಗಿ ಜನರು ಕಾಡಾನೆಗಳ ದಾಳಿಗೆ ಸಿಲುಕುತ್ತಿದ್ದರು. ಅದನ್ನು ತಪ್ಪಿಸಿ, ಜನರಿಗೆ ತುರ್ತಾಗಿ ಕಾಡಾನೆಗಳ ಬಗ್ಗೆ ಎಚ್ಚರಿಕೆ ಸಂದೇಶ ನೀಡುವ ನಿಟ್ಟಿನಲ್ಲಿ ಥರ್ಮಲ್ ಡ್ರೋನ್ ಬಳಕೆ ಮಾಡಲಾಗುತ್ತಿದೆ. ವಿಶೇಷ ರೀತಿಯಲ್ಲಿ ಈ ಡ್ರೋನ್ ಸಿದ್ಧಪಡಿಸಲಾಗಿದ್ದು, ಹೆಚ್ಚಿನ ಡ್ರೋನ್‌ಗಾಗಿ ಪ್ರಸ್ತಾವನೆ ಕೂಡ ಸಲ್ಲಿಸಲಾಗಿದೆ. ಡ್ರೋನ್ ನಿರ್ವಹಣೆಗೆ ಕೌಶಲ್ಯ ಹೊಂದಿರುವ ಸಿಬ್ಬಂದಿ ನಿಯೋಜನೆ ಮಾಡಲಾಗುವುದು.**
>
> **-ಸೌರಭ್ ಕುಮಾರ್, ಉಪ ಅರಣ್ಯ ಸಂರಕ್ಷಣಾಧಿಕಾರಿ**

## ಮಹದಾಯಿ ನ್ಯಾಯಮಂಡಳಿ ಅವಧಿ ಮತ್ತೆ ವಿಸ್ತರಣೆ

• ಪ್ರಜೋದಯ ವರದಿ

**ನವದೆಹಲಿ:** ಮಹದಾಯಿ ಜಲ ವಿವಾದಕ್ಕೆ ಸಂಬಂಧಿಸಿದಂತೆ ಹೆಚ್ಚಿನ ವರದಿ ಸಲ್ಲಿಸುವ ಸಂಬಂಧ ನ್ಯಾಯಮಂಡಳಿಯ ಅವಧಿಯನ್ನು ಮತ್ತೆ ಒಂದು ವರ್ಷ ವಿಸ್ತರಿಸಲಾಗಿದೆ.

ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರ ನಡುವಿನ ನೀರು ಹಂಚಿಕೆ ವಿವಾದಗಳನ್ನು ಪರಿಹರಿಸಲು ಈ ನ್ಯಾಯಮಂಡಳಿಯನ್ನು 2010ರಲ್ಲಿ ಸ್ಥಾಪಿಸಲಾಗಿತ್ತು. ನ್ಯಾಯಮಂಡಳಿಗೆ ಕರ್ನಾಟಕ ಹಾಗೂ ಗೋವಾ ಸರ್ಕಾರಗಳು ಸ್ಪಷ್ಟೀಕರಣ ಅರ್ಜಿ ಸಲ್ಲಿಸಿವೆ. ಹೀಗಾಗಿ, ಹೆಚ್ಚಿನ ವರದಿ ನೀಡಲು ಇನ್ನಷ್ಟು ಕಾಲಾವಕಾಶ ನೀಡಬೇಕೆಂದು ಜಲಶಕ್ತಿ ಸಚಿವಾಲಯವನ್ನು ನ್ಯಾಯಮಂಡಳಿ ಕೋರಿತ್ತು. ವರದಿ ನೀಡುವ ಅವಧಿಯನ್ನು ವಿಸ್ತರಿಸಿ ಸಚಿವಾಲಯ ಅಧಿಸೂಚನೆ ಹೊರಡಿಸಿದೆ.

